# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :– 22/03/2021 ರಂದು ವಾರ್ಡ್–32ರ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :–**

- ಶ್ರೀ. ಬಸವರಾಜು, ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ಸದಸ್ಯ ಕಾರ್ಯದರ್ಶಿ
- ಶ್ರೀ. ಅನಿಲ್ ಪ್ರಭು ಹಿರಿಯ ಆರೋಗ್ಯ ಪರೀವಿಕ್ಷಕರು
- ಶ್ರೀ. ದಯಾನಂದ, ಕಿರಿಯ ಆರೋಗ್ಯ ಪರೀವಿಕ್ಷಕರು.
- ಶ್ರೀ. ಸ್ವಾಮಿ ಸ್ಟ್ರೀಟ್ ಲೈಟ್ ಸೂಪರ್‌ವೈಸರ್

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯ ಕಾರ್ಯದರ್ಶಿ ವಾರ್ಡ್–32 ರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್–32 ರ ವಾರ್ಡ್ ಸಮಿತಿ ಸಭೆಯನ್ನು ಎಲ್. ಆರ್. ಬಂಡೆ ವಾರ್ಡ್ ಕಛೇರಿಯಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿಗಳು ವಾರ್ಡ್‌ನ ಸಾರ್ವಜನಿಕರ ಕುಂದು ಕೋರತೆಗಳು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ತಿಳಿಸಿರುತ್ತಾರೆ.

➢ **ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ಸಂಗೀತ, ನಾಟಕ, ಇನ್ನೂ ಇತರೆ ಸಾಂಸ್ಕೃತಿಕ ಚಟುವಟಿಕೆಗಳು ನಡೆಸಲು ಯಾವುದೆ ಸ್ಥಳ ಅಥವಾ ರಂಗಮಂದಿರ ಕೊರತೆ ಇದ್ದು ಇಂತಹ ಕಾರ್ಯಕ್ರಮಗಳನ್ನು ನಿರ್ವಹಿಸಲು ಸೂಕ್ತ ಸ್ಥಳವನ್ನು ಸಾಂಸ್ಕೃತಿಕ ಸಂಘಕ್ಕೆ ತಿಳಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಮುಖ್ಯ ರಸ್ತೆ ಗುಂಡಿಗಳನ್ನು ಮುಚ್ಚಲು ಕೂಡಲೆ ಕಾರ್ಯಾಚರಣೆ ಹೆಚ್ಚಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಮತ್ತು ಫುಟ್ ಪಾತ್ ಒತ್ತುವರಿಯನ್ನು ತೇರೆವುಗೊಳಿಸಲು ಕ್ರಮ ಬದ್ಧವಾದ ವೇಳಾಪಟ್ಟಿಯೊಂದಿಗೆ ಕಾರ್ಯಾಚರಣೆ ನಡೆಸಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವಂತಹ ಸಮಸ್ಯೆಗಳಿಗೆ ಪರಿಹರಿಸುವಂತೆ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.**

➢ **ಘನತ್ಯಾಜ್ಯ ಇಲಾಖೆಗೆ ಸಂಬಂಧಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ 4ನೇ ಮುಖ್ಯ ರಸ್ತೆ ಹೆಚ್.ಬಿ.ಆರ್ ಲೇಔಟ್‌ನಲ್ಲಿ ಹೊಸದಾಗಿ ಬ್ಲಾಕ್ ಸ್ಪಾಟ್ ಸೃಷ್ಟಿಯಾಗದಂತೆ ತ್ವರಿತವಾಗಿ ಕ್ರಮ ಕೈಗೊಳ್ಳಲು ಅಧಿಕಾರಿ ಹಾಗು ಸಿಬ್ಬಂದಿ ವರ್ಗದವರಿಗೆ ಸೂಚಿಸಿದರು.

**ಕ್ರಮ ಹಿರಿಯ ಆರೋಗ್ಯ ಪರೀವಿಕ್ಷಕರು & ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕೂಡಲೆ ಕ್ರಮ ವಹಿಸಲು ಸೂಚಿಸಿದರು.**

➢ **ಪೊಲೀಸ್ ಇಲಾಖೆಗೆ (ಸಿವಿಲ್) ಸಂಬಂಧಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಸೇವನೆ, ಮದ್ಯ ಕುಡಿಯುವುದು, ಕಳ್ಳರ ಹಾವಳಿ ಹೆಚ್ಚಾಗಿ ಕಂಡುಬಂದಿದ್ದು ಪೊಲೀಸ್ ಇಲಾಖೆ ಸಭೆಗೆ ಹಾಜರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೆಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

➢ **ಪೊಲೀಸ್ ಇಲಾಖೆಗೆ (ಟ್ರಾಫಿಕ್) ಸಂಬಂಧಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ವಾಹನಗಳ ನೀಲುಗಡೆ, ನಿರ್ಜೀವವಾದ ವಾಹನಗಳ (Dead Vehical) ತೆರುವುಗೊಳಿಸುದು...ಇತೆರೆ ಸಮಸ್ಯೆಗಳು ಹಾಲಿಸಲು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೆಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

**ಸದಸ್ಯ ಕಾರ್ಯದರ್ಶಿ ವಾರ್ಡ್ –32**

**<u>ಪ್ರತಿಗಳನ್ನು:</u>**

- ಮಾನ್ಯ ಆಡಳಿತಾಧಿಕಾರಿರವರ ಅಪ್ತ ಶಾಖೆಗೆ ಸಲ್ಲಿಸಿ ಆಡಳಿತಾಧಿಕಾರಿರವರ ಗಮನಕ್ಕೆ ತರಲು ಕೊರಿದೆ.
- ಮಾನ್ಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೊರಿದೆ
- ಮಾನ್ಯ ವಲಯ ಆಯುಕ್ತರುರವರ ಅಪ್ತಶಾಖೆಗೆ ಸಲ್ಲಿಸಿ ಆಯುಕ್ತರವರ ಗಮನಕ್ಕೆ ತರಲು ಕೊರಿದೆ.
- ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಅಪ್ತಶಾಖೆಗೆ ಸಲ್ಲಿಸಿ ಅಯುಕ್ತರವರ ಗಮನಕ್ಕೆ ತರಲು ಕೊರಿದೆ.
- ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ–ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.

- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಹಿರಿಯ ವೈದ್ಯಾಧಿಕಾರಿಗಳು (ಪುಲಿಕೇಶಿನಗರ) ರವರ ಮಾಹಿತಿಗಾಗಿ ಸಲ್ಲಿಸಿದೆ
- ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಆರ್.ಟಿ.ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್(ಟ್ರಾಫಿಕ್) ಆರ್.ಟಿ.ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ನಿರ್ದೇಶಕರು (ಪೂರ್ವ) ಪಶು ಪಾಲನೆ ಇಲಾಖೆ ರವರ ಮಾಹಿತಿಗಾಗಿ ಸಲ್ಲಿಸಿದೆ.
- ವಲಯ ಅರಣ್ಯಾಧಿಕಾರಿಗಳು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಛೇರಿ ಪ್ರತಿ.